ದಿನಾಂಕ 26/11/2019

## ರಾಮಮೂರ್ತಿಯಿಂದ ತೆರವಾಗಿರುವ ಜಾಗಕ್ಕೆ ಡಿ.12ರಂದು ಚುನಾವಣೆ

# ರಾಜ್ಯಸಭಾ ಚುನಾವಣೆ ಪ್ರಕಟ: ಜೆಡಿಎಸ್ ತಟಸ್ಥ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಯ ಒಂದು ಸ್ಥಾನಕ್ಕೆ ನಡೆಯುವ ಉಪಚುನಾವಣೆಗೆ ಸೋಮವಾರ ಅಧಿಸೂಚನೆ ಪ್ರಕಟವಾಗೊಂಡಿದ್ದು, ಡಿ.12 ರಂದು ಚುನಾವಣೆ ನಡೆಯಲಿದೆ.



ವಿಧಾನಸಭಾ ಕಾರ್ಯದರ್ಶಿ ಹಾಗೂ ರಾಜ್ಯಸಭಾ ಉಪಚುನಾವಣಾ ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರು ಹೊರಡಿಸಿರುವ ಅಧಿಸೂಚನೆಯಲ್ಲಿ, ನ.25ರ ಸೋಮವಾರದಿಂದ ಡಿ.2ರ ಸೋಮವಾರದವರೆಗೆ ನಾಮಪತ್ರ ಸಲ್ಲಿಸಬಹುದಾಗಿದೆ. ಡಿ.12ರಂದು ಮತದಾನ ನಡೆಯಲಿದೆ ಎಂದು ಸ್ಪಷ್ಟಪಡಿಸಲಾಗಿದೆ.

## ಬಿಜೆಪಿಯಿಂದ ರಾಮಮೂರ್ತಿ?

**ಇನ್ನು ಹಾಲಿ ರಾಜ್ಯಸಭಾ ಸ್ಥಾನಕ್ಕೆ ರಾಜೀನಾಮೆ ನೀಡಿ ಬಿಜೆಪಿ ಸೇರ್ಪಡೆಗೊಂಡಿರುವ ರಾಮಮೂರ್ತಿ ಅವರಿಗೆ ರಾಜ್ಯಸಭಾ ಸ್ಥಾನ ನೀಡುವ ಸಾಧ್ಯತೆ ಇದೆ ಎನ್ನುವ ಮಾತುಗಳು ಕೇಳಿಬಂದಿದೆ. ಆದರೆ ಬಿಜೆಪಿ ಸೇರಿದಂತೆ ಮೂರು ಪಕ್ಷಗಳು ಉಪಚುನಾವಣೆಯಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಿರುವುದರಿಂದ, ಈ ನಿಟ್ಟಿನಲ್ಲಿ ಯಾವುದೇ ಅಂತಿಮ ತೀರ್ಮಾನ ಕೈಗೊಂಡಿಲ್ಲ. ಇನ್ನೆರಡು ದಿನದಲ್ಲಿ ಬಿಜೆಪಿ ತನ್ನ ಅಧಿಕೃತ ಅಭ್ಯರ್ಥಿಯನ್ನು ಘೋಷಣೆ ಮಾಡುವ ಸಾಧ್ಯತೆ ದಟ್ಟವಾಗಿದೆ ಎಂದು ಮೂಲಗಳು ತಿಳಿಸಿವೆ.**

ಕಾಂಗ್ರೆಸ್‌ನಿಂದ ರಾಜ್ಯಸಭೆಗೆ ಆಯ್ಕೆಯಾಗಿದ್ದ ಕೆ.ಸಿ.ರಾಮಮೂರ್ತಿ ಅವರಿಂದ ತೆರವಾಗಿದ್ದ ಸ್ಥಾನಕ್ಕೆ ಈ ಚುನಾವಣೆ ನಡೆಯಲಿದೆ. ಆದ್ದರಿಂದ ಅವರಿಂದ ತೆರವಾದ ಒಂದು ಸ್ಥಾನಕ್ಕೆ ಉಪಚುನಾವಣೆ ನಡೆಯಲಿದ್ದು, ರಾಮಮೂರ್ತಿ ಅವರು ಈಗಾಗಲೇ ಕಾಂಗ್ರೆಸ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ಬಿಜೆಪಿ ಸೇರಿದ್ದಾರೆ.

ಸೋಮವಾರದಿಂದಲೇ ನಾಮಪತ್ರ ಸಲ್ಲಿಕೆಗೆ ಅವಕಾಶ ನೀಡಲಾಗಿದ್ದು, ವಿಧಾನ ಸೌಧದ ಮೊದಲ ಮಹಡಿಯಲ್ಲಿ ಭಾನುವಾರದ ರಜಾ ದಿನ ಹೊರತುಪಡಿಸಿ ಉಳಿದ ದಿನಗಳಲ್ಲಿ ಬೆಳಗ್ಗೆ 11ರಿಂದ ಮಧ್ಯಾಹ್ನ 3ರವರೆಗೆ ಸೂಚಕರಾಗಲಿ ಅಥವಾ ಉಮೇದುದಾರರಾಗಲಿ ನಾಮಪತ್ರ ಸಲ್ಲಿಸಬಹುದಾಗಿದೆ.

ವಿಧಾನಸಭೆಯಲ್ಲಿ ಈಗಿರುವ ರಾಜಕೀಯ ಪಕ್ಷಗಳ ಶಾಸಕರ ಸಂಖ್ಯಾಬಲದ ಆಧಾರದ ಮೇಲೆ ಬಿಜೆಪಿ ಅಭ್ಯರ್ಥಿ ಆಯ್ಕೆಯಾಗುವುದು ಖಚಿತವಾಗಿದೆ.

**ಬಿಜೆಪಿ ಗೆಲುವು ಖಚಿತ:** ಪ್ರಸ್ತುತ ವಿಧಾನಸಭೆಯಲ್ಲಿ ಸಭಾಧ್ಯಕ್ಷರು ಸೇರಿ 207 ಸದಸ್ಯರಿದ್ದಾರೆ. ಆಡಳಿತಾರೂಢ ಬಿಜೆಪಿ 104, ಕಾಂಗ್ರೆಸ್ 66, ಜೆಡಿಎಸ್ 34, ಬಿಎಸ್‌ಪಿ ಒಂದು, ಒಬ್ಬ ಪಕ್ಷೇತರರ ಹಾಗೂ ಸಭಾಧ್ಯಕ್ಷರು ಸೇರಿದಂತೆ 207 ಸದಸ್ಯರಿದ್ದಾರೆ. ಒಂದು ಸ್ಥಾನಕ್ಕೆ ಉಪ ಚುನಾವಣೆ ನಡೆಯುತ್ತಿರುವುದರಿಂದ ಯಾವುದೇ ಅಭ್ಯರ್ಥಿ ಗೆಲ್ಲಲು ಕನಿಷ್ಠ 112 ಸದಸ್ಯರ ಮತ ಅಗತ್ಯವಿದೆ. ಆದ್ದರಿಂದ ಒಂದು ಸ್ಥಾನಕ್ಕೆ ಬಿಜೆಪಿಯಿಂದ ಸ್ಪರ್ಧಿಸುವ ಅಭ್ಯರ್ಥಿ ಸುಲಭ ಗೆಲುವು ಸಾಧಿಸಲಿದ್ದಾರೆ ಎನ್ನುವ ಲೆಕ್ಕಾಚಾರವಿದೆ.

ಇನ್ನು ಜೆಡಿಎಸ್‌ನ ಈ ಬಾರಿಯ ರಾಜ್ಯಸಭೆ ಉಪಚುನಾವಣೆಯಲ್ಲಿ ತಟಸ್ಥವಾಗಿರಲು ನಿರ್ಧರಿಸಿದ್ದು, ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ಉಪಚುನಾವಣೆ ನಡೆಯುತ್ತಿದ್ದು, ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ. ರಾಜ್ಯಸಭೆ ಉಪಚುನಾವಣೆಯಲ್ಲಿ ಯಾವುದೇ ಅಭ್ಯರ್ಥಿ ಗೆಲ್ಲಲು ಕನಿಷ್ಠ 112 ಶಾಸಕರ ಮತಗಳನ್ನು ಪಡೆಯಬೇಕಾಗುತ್ತದೆ. ಆದರೆ ಸದ್ಯ ಜೆಡಿಎಸ್ ಶಾಸಕರ ಸಂಖ್ಯೆ 34 ಇದೆ. ಆದ್ದರಿಂದ ಗೆಲ್ಲುವಷ್ಟು ಶಾಸಕರು ವಿಧಾನಸಭೆಯಲ್ಲಿ ಇಲ್ಲದ ಕಾರಣ ರಾಜ್ಯಸಭೆ ಉಪಚುನಾವಣೆಯಲ್ಲಿ ಸ್ಪರ್ಧೆಯಿಂದ ದೂರ ಉಳಿಯುವ ಸಾಧ್ಯತೆಗಳಿವೆ ಎಂದು ಜೆಡಿಎಸ್ ಮೂಲಗಳು ತಿಳಿಸಿವೆ.

ಕಾಂಗ್ರೆಸ್ ಮತ್ತು ಜೆಡಿಎಸ್ ನಡುವಿನ ಮೈತ್ರಿ ಮುರಿದುಬಿದ್ದಿದ್ದು, ವಿಧಾನಸಭೆ ಉಪಚುನಾವಣೆಯಲ್ಲಿ ಎರಡೂ ಪಕ್ಷಗಳು ಪ್ರತ್ಯೇಕವಾಗಿ ಸ್ಪರ್ಧಿಸಿದ್ದು, ಪರಸ್ಪರ ಎದುರಾಳಿಗಳಾಗಿವೆ. ರಾಜ್ಯಸಭೆ ಚುನಾವಣೆ ಸಂದರ್ಭದಲ್ಲಿ ಮತ್ತೆ ಈ ಎರಡೂ ಪಕ್ಷಗಳ ನಡುವೆ ಮೈತ್ರಿ ಮೂಡುವ ಸಾಧ್ಯತೆ ವಿರಳವಾಗಿದೆ.

ಇದರೊಂದಿಗೆ ವಿಧಾನಸಭೆ ಉಪಚುನಾವಣೆ ಫಲಿತಾಂಶ ಏನಾಗುತ್ತದೋ ಎಂಬುದು ಈಗಲೇ ಊಹಿಸುವುದು ಕಷ್ಟ. ಹೀಗಾಗಿ ರಾಜ್ಯಸಭೆ ಚುನಾವಣೆಯಿಂದ ದೂರ ಉಳಿಯುವತ್ತ ಜೆಡಿಎಸ್ ವರಿಷ್ಠರ ಚಿಂತಿಸಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಆಡಳಿತಾರೂಢ ಬಿಜೆಪಿ ಪ್ರಸ್ತುತ ವಿಧಾನಸಭೆಯಲ್ಲಿ 104 ಶಾಸಕರ ಬಲ ಹೊಂದಿದೆ. ರಾಜ್ಯಸಭೆ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗೆ ಅನುಕೂಲವಾಗುವ ಪರಿಸ್ಥಿತಿ ಸದ್ಯಕ್ಕಿದೆ.

ಉಪಚುನಾವಣೆಯಲ್ಲಿ ಕನಿಷ್ಠ 7 ರಿಂದ 8 ಸ್ಥಾನಗಳನ್ನು ಗೆದ್ದರೆ ರಾಜ್ಯಸಭೆ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಹಾದಿ ಸುಗಮವಾಗಲಿದೆ.